# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 636 |
| ಸದಸ್ಯರ ಹೆಸರು | : | ಶ್ರೀ ಎನ್.ರವಿಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 14.12.2020 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ<br>ಹಾಗೂ ಸಕಾಲ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೊರೋನಾ ಸಂಕಷ್ಟದ ಸಮಯದಲ್ಲಿ ಸರಕಾರಿ ಶಾಲೆಯ ಮಕ್ಕಳಿಗೆ ಆನ್‌ಲೈನ್ ಮೂಲಕ ಶಿಕ್ಷಣ ನೀಡುತ್ತಿದ್ದು, ಅದಕ್ಕಾಗಿ ಪಾಠ ಪುಸ್ತಕ ಮತ್ತು ನೋಟ್ ಪುಸ್ತಕಗಳನ್ನು ವಿತರಿಸಲಾಗಿದೆಯೇ; | ಸರ್ಕಾರಿ ಶಾಲೆಗಳಲ್ಲಿ 1 ರಿಂದ 10ನೇ ತರಗತಿಗಳ ವರೆಗೆ ವ್ಯಾಸಂಗ ಮಾಡುತ್ತಿರುವ ಎಲ್ಲಾ ಮಕ್ಕಳಿಗೆ ಉಚಿತವಾಗಿ ಪಠ್ಯಪುಸ್ತಕ ಮತ್ತು ಅಭ್ಯಾಸ ಪುಸ್ತಕಗಳನ್ನು ಈಗಾಗಲೇ ವಿತರಿಸಲಾಗಿದೆ. ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ನೋಟ್ ಪುಸ್ತಕ ವಿತರಣಾ ಕಾರ್ಯಕ್ರಮಕ್ಕೆ ಅನುದಾನ ಒದಗಿಸಿರುವುದಿಲ್ಲ ಈ ಹಿನ್ನೆಲೆಯಲ್ಲಿ ನೋಟ್ ಪುಸ್ತಕಗಳನ್ನು ವಿತರಿಸುವ ಕಾರ್ಯಕ್ರಮ ಜಾರಿಯಲ್ಲಿರುವುದಿಲ್ಲ. |
| ಆ) | 2020–21ರ ಶೈಕ್ಷಣಿಕ ವರ್ಷ ಪ್ರಾರಂಭವಾಗಿದ್ದಲ್ಲಿ ಆನ್‌ಲೈನ್ ಮೂಲಕ ಪಾಠ ಕೇಳಿದ ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಪರೀಕ್ಷೆಗಳನ್ನು ನಡೆಸಲಾಗುವುದೇ; ಅಥವಾ ಪರೀಕ್ಷೆಯೇ ಇಲ್ಲದೆ ಮುಂದಿನ ತರಗತಿಗೆ ಉತ್ತೀರ್ಣ ಎಂದು ಘೋಷಿಸಲಾಗುವುದೇ; ಈ ಕುರಿತು ಸರಕಾರದ ನಿಲುವೇನು; | 2020–21ರ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳಿಗೆ ಪರೀಕ್ಷೆ ನಡೆಸಬೇಕೇ? ಅಥವಾ ಪರೀಕ್ಷೆಯೇ ಇಲ್ಲದೆ ವಿದ್ಯಾರ್ಥಿಗಳನ್ನು ಉತ್ತೀರ್ಣ ಮಾಡುವುದರ ಕುರಿತು ಪ್ರಸ್ತುತ ಯಾವುದೇ ತೀರ್ಮಾನ ತೆಗೆದುಕೊಂಡಿರುವುದಿಲ್ಲ. |
| ಇ) | ಮಕ್ಕಳಿಗೆ ಬಿಸಿಯೂಟ ವಿತರಿಸಲಾಗಿದೆಯೇ; ಇದಕ್ಕಾಗಿ ತೆಗೆದಿರಿಸಲಾದ ಅಕ್ಕಿ ಮತ್ತು ಇತರೆ ಸಾಮಾನುಗಳನ್ನು ಯಾವ ರೀತಿ ಬಳಕೆ ಮಾಡಿಕೊಳ್ಳಲಾಗಿದೆ. | 2020–21ನೇ ಶೈಕ್ಷಣಿಕ ಸಾಲಿನಲ್ಲಿ ಕೋವಿಡ್–19 ವೈರಾಣು ಸೋಂಕಿನ ಹಿನ್ನೆಲೆಯಲ್ಲಿ ಶಾಲೆಗಳನ್ನು ಪ್ರಾರಂಭಿಸದೇ ಇರುವುದರಿಂದ ಶಾಲೆಗಳಲ್ಲಿ ಬಿಸಿಯೂಟ ವಿತರಿಸಲಾಗಿರುವುದಿಲ್ಲ.<br><br>ಪ್ರಸ್ತುತ ಶಾಲೆಗಳು ಮುಚ್ಚಿರುವ ಕಾರಣ ಮಕ್ಕಳಿಗೆ ನೀಡಲಾಗುತ್ತಿದ್ದ ಮಧ್ಯಾಹ್ನದ ಬಿಸಿಯೂಟದ ಬದಲಾಗಿ ಕೇಂದ್ರ ಸರ್ಕಾರದ ಮಾರ್ಗಸೂಚಿ ಮತ್ತು ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ–2013ರಲ್ಲಿನ ಮಾನದಂಡಗಳಂತೆ ನಿಗದಿತ ಪ್ರಮಾಣದ ಆಹಾರ ಧಾನ್ಯಗಳನ್ನು (ಅಕ್ಕಿ/ಗೋಧಿ) ಮತ್ತು ಅಡುಗೆ ತಯಾರಿಕಾ ವೆಚ್ಚದ ಮೊತ್ತಕ್ಕೆ ಸಮಾನಾಂತರವಾಗಿ ತೊಗರಿಬೇಳೆಯನ್ನು ಆಹಾರ ಭದ್ರತಾ ಭತ್ಯೆಯ ರೂಪದಲ್ಲಿ ಮಕ್ಕಳಿಗೆ ವಿತರಣೆ ಮಾಡುವ |

| | | |
|---|---|---|
| | | ಮೂಲಕ ಮಧ್ಯಾಹ್ನದ ಬಿಸಿಯೂಟ ಯೋಜನೆಯನ್ನು ಅನುಷ್ಠಾನ ಮಾಡಲಾಗುತ್ತಿದೆ. |
| ಈ) | ಬಿಸಿಯೂಟ ಸಿಬ್ಬಂದಿಗೆ ಗೌರವ ಧನ ಪಾವತಿಸಲಾಗಿದೆಯೇ; ಕೊರೋನಾ ಸಮಯದಲ್ಲಿ ಇವರಿಗೆ ಸರಕಾರದಿಂದ ಎಷ್ಟು ಸಹಾಯಧನ ನೀಡಲಾಗಿದೆ? | ಬಿಸಿಯೂಟ ಸಿಬ್ಬಂದಿಗಳಿಗೆ ಗೌರವ ಸಂಭಾವನೆಯನ್ನು ಪಾವತಿಸಲಾಗಿದೆ.<br><br>2020-21ನೇ ಸಾಲಿನಲ್ಲಿ ಜೂನ್, ಜುಲೈ ಮತ್ತು ಆಗಸ್ಟ್-2020ರ ಮಾಹೆಗಳಿಗೆ ಮಧ್ಯಾಹ್ನ ಉಪಹಾರ ಯೋಜನೆಯಡಿ ಕರ್ತವ್ಯ ನಿರ್ವಹಿಸುತ್ತಿರುವ 1,17,999 ಅಡುಗೆ ಸಿಬ್ಬಂದಿಗಳಿಗೆ 03 ತಿಂಗಳ ಗೌರವ ಸಂಭಾವನೆಯನ್ನು ಪಾವತಿಸಲು ರೂ 9345.76 ಲಕ್ಷಗಳನ್ನು ಅನುದಾನವನ್ನು ಸರ್ಕಾರದಿಂದ ನೀಡಲಾಗಿದೆ. |

ಇಪಿ 51 ಎಂಎಂಎಸ್ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು